## ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾ ಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.

**ಸಿ.ಸಿ. ಸಂಖ್ಯೆ: 24/2020**

ಫಿರ್ಯಾದಿದಾರರುಃ ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ ಃ ಎ 1. ನಿಂಗರಾಜು
ಬಿನ್ ನಿಂಗೇಗೌಡ
ಸುಮಾರು 37 ವರ್ಷ ವಯಸ್ಸು,
ವಾಸಃ ಆಸ್ವಾಳು ಗ್ರಾಮ,
ಹುಣಸೂರು ತಾಲ್ಲೂಕು,
ಮೈಸೂರು ಜಿಲ್ಲೆ.

### ದೋಷಾರೋಪಣೆ

ಶ್ರೀಮತಿ ಪೂಜಾ ಬೆಳಕೇರಿ, ಅಪರ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಹುಣಸೂರು ಆದ ನಾನು ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

ದಿಃ 26.07.2019 ರಂದು ಸಂಜೆ 6.40 ಗಂಟೆ ಸಮಯದಲ್ಲಿ ಬಿಳಿಕೆರೆ ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ಆಸ್ವಾಳು ಗ್ರಾಮದಲ್ಲಿ ಆರೋಪಿಯಾದ ನೀವು ಅಪರಾಧ ಮಾಡುವ ಉದ್ದೇಶವುಳ್ಳವರಾಗಿ, ನಿಮ್ಮ ಬಾಬ್ತು ಚಿಲ್ಲರೆ ಅಂಗಡಿಯ ಮುಂಭಾಗದಲ್ಲಿರುವ ಸಾರ್ವಜನಿಕ ರಸ್ತೆಯಲ್ಲಿ ಒಂದು ಖಾಕಿ ರಟ್ಟಿನ ಬಾಕ್ಸಿನಲ್ಲಿ 556/- ರೂ ಬೆಲೆಯ 90 ಎಂ.ಎಲ್. ಅಳತೆಯ ಒರಿಜಿನಲ್ ಟ್ರಾವೆಲರ್ ಪ್ರೀಮಿಯಂ ವಿಸ್ಕಿ ಕಂಪನಿಯ 15 ಮದ್ಯದ ಪ್ಯಾಕೆಟ್ ಗಳನ್ನು ಮತ್ತು 424/- ರೂ ಬೆಲೆಯ 90 ಎಂ.ಎಲ್. ಅಳತೆಯ ವಿಂಡ್ಸರ್ ಡೀಲಕ್ಸ್ ವಿಸ್ಕಿ ಕಂಪನಿಯ 14 ಮದ್ಯದ ಪ್ಯಾಕೇಟುಗಳನ್ನು ಅಕ್ರಮವಾಗಿ ಯಾವುದೇ ರಹದಾರಿ ಇಲ್ಲದೇ ಮತ್ತು ಯಾವುದೇ ಅಧಿಕೃತ ಅಂಗಡಿಯ ಬಿಲ್ಲುಗಳು ಇಲ್ಲದೇ ತನ್ನ ಬಳಿ ಸಂಗ್ರಹಿಸಿ

ಇಟ್ಟುಕೊಂಡಿರುತ್ತೀರೆಂದು, ಆ ಮೂಲಕ ಕರ್ನಾಟಕ ಅಬಕಾರಿ ಕಾಯಿದೆ ಕಲಂ 32 ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

2. ಕೊನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, ಆರೋಪಿಯಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವುಳ್ಳವರಾಗಿ, ಒಂದು ಖಾಕಿ ರಟ್ಟಿನ ಬಾಕ್ಸಿನಲ್ಲಿ 556/- ರೂ ಬೆಲೆಯ 90 ಎಂ.ಎಲ್. ಅಳತೆಯ ಒರಿಜಿನಲ್ ಟ್ರಾವೆಲರ್ ಪ್ರೀಮಿಯಂ ವಿಸ್ಕಿ ಕಂಪನಿಯ 15 ಮದ್ಯದ ಪ್ಯಾಕೆಟ್ ಗಳನ್ನು ಮತ್ತು 424/- ರೂ ಬೆಲೆಯ 90 ಎಂ.ಎಲ್. ಅಳತೆಯ ವಿಂಡ್ಸರ್ ಡೀಲಕ್ಸ್ ವಿಸ್ಕಿ ಕಂಪನಿಯ 14 ಮದ್ಯದ ಪ್ಯಾಕೇಟುಗಳನ್ನು ಅಕ್ರಮವಾಗಿ ತಮ್ಮ ಬಳಿ ಸಂಗ್ರಹಿಸಿಕೊಂಡು ಸಾರ್ವಜನಿಕರಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದೀರೆಂದು, ಆ ಮೂಲಕ ಕರ್ನಾಟಕ ಅಬಕಾರಿ ಕಾಯಿದೆ ಕಲಂ 34 ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

(ಮೇಲ್ಕಂಡ ಆರೋಪಣೆಯು ಈ ನ್ಯಾಯಾಲಯದ ಸಂಜ್ಞೆಯೊಳಗೆ ಬರುತ್ತಿದ್ದು ಹಾಗೂ ಸದರಿ ಆರೋಪಣೆಗೆ ಆರೋಪಿಯಾದ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಗುರಿಯಾಗಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.)

**(ಪೂಜಾ ಬೆಳಕೇರಿ)**

ದಿನಾಂಕ: **27.09.2023**

ಹೆಚ್ಚುವರಿ ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು, ಹುಣಸೂರು.

# ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾ ಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.

**ಸಿ.ಸಿ. ಸಂಖ್ಯೆಃ 24/2020**

ಫಿರ್ಯಾದಿದಾರರುಃ ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ ಃ ಎ 1. ನಿಂಗರಾಜು
ಬಿನ್ ನಿಂಗೇಗೌಡ

ಭಾರತೀಯ ದಂಡ ಸಂಹಿತೆ ಕಲಂ **240(2)** ರ ಅಡಿಯಲ್ಲಿ ಆರೋಪಿಯ ಹೇಳಿಕೆ

ಪ್ರಶ್ನೆಃ ನಿಮಗೆ ಈಗ ಓದಿ ಹೇಳಿದ ದೋಷಾರೋಪಣೆ ತಿಳಿಯಿತೆ**?**

ಉತ್ತರಃ

ಪ್ರಶ್ನೆಃ ತಪ್ಪೊಪ್ಪಿಕೊಳ್ಳುವಿರೋ**,** ವಿಚಾರಣೆಯಾಗಬೇಕೆನ್ನುವಿರೋ**?**

ಉತ್ತರಃ

ಮೇಲ್ಕಂಡ ದೋಷಾರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿದ್ದು, ಆರೋಪಿಯು ನೀಡಿದ ಉತ್ತರವನ್ನು ಹಾಗೆಯೇ ದಾಖಲಿಸಿಕೊಂಡಿದೆಯೆಂದು ಈ ಮೂಲಕ ದೃಢೀಕರಿಸುತ್ತೇನೆ.

(ಪೂಜಾ ಬೆಳಕೇರಿ)

ದಿನಾಂಕಃ **27.09.2023** ಅಪರ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದಂ.ನ್ಯಾ.. ದಂಡಾಧಿಕಾರಿಗಳು, ಹುಣಸೂರು.